ಕರ್ನಾಟಕ ಸರ್ಕಾರ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ
ನಿರ್ದೇಶಕರ ಕಛೇರಿ, ನೆಲಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ.ಅಂಬೇಡ್ಕರ್ ವೀಧಿ, ಬೆಂಗಳೂರು-560001
ದೂ.ಸಂ.080-22860907 ಫ್ಯಾಕ್ಸ್:080-22868347 ಇ-ಮೇಲ್ ವಿಳಾಸ: dir-dwdsc-ka@nic.in/dirdwdscka@gmail.com

ಸಂಖ್ಯೆ:ವಿಹಿಇ/ಸಿಬ್ಬಂದಿ/ಸಿ1/57/2021-22 1928 ದಿನಾಂಕ:18.10.2022

# ಸುತ್ತೋಲೆ

ವಿಷಯ: ಗ್ರಾಮೀಣ/ನಗರ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ಗೌರವಧನ ಹೆಚ್ಚಳ ಮಾಡಿ ಆದೇಶ ಹೊರಡಿಸಿರುವ ಬಗ್ಗೆ

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಮಮಇ 99 ಪಿಹೆಚ್‌ಪಿ 2022 ಬೆಂಗಳೂರು, ದಿನಾಂಕ: 14.09.2022

********

ವಿಕಲಚೇತನರ ಕಾರ್ಯಕ್ರಮಗಳು ಗ್ರಾಮೀಣ ಮತ್ತು ನಗರ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಹಾಗೂ ಇಲಾಖಾ ಸೌಲಭ್ಯಗಳನ್ನು ಸಮರ್ಪಕವಾಗಿ ವಿಕಲಚೇತನರಿಗೆ ತಲುಪಿಸಲು ಅನುಕೂಲವಾಗುವಂತೆ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಹಾಗೂ ನಗರ ಪುನರ್ವಸತಿ ಕಾರ್ಯಕರ್ತರ ಮಾಸಿಕ ಗೌರವಧನವನ್ನು ರೂ. 6000/- ರಿಂದ ರೂ 9000/- ಗಳಿಗೆ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಮಾಸಿಕ ಗೌರವಧನವನ್ನು ರೂ.12,000/- ರಿಂದ 15,000/- ಗಳಿಗೆ ಹೆಚ್ಚಿಸಿ ಪರಿಷ್ಕರಿಸಿ ಉಲ್ಲೇಖಿತ ಸರ್ಕಾರದ ಆದೇಶದಂತೆ ಮಂಜೂರಾತಿ ನೀಡಿ ಆದೇಶ ಹೊರಡಿಸಲಾಗಿರುತ್ತದೆ.

ಸರ್ಕಾರದ ಆದೇಶವನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು ಆದೇಶದನ್ವಯ ದಿನಾಂಕ: 14ನೇ ಸೆಪ್ಟಂಬರ್-2022 ರಿಂದ ಅನ್ವಯವಾಗುವಂತೆ ಅಗತ್ಯ ಕ್ರಮವಹಿಸಲು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ, ಬೆಂಗಳೂರು

**ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಅಗತ್ಯ ಕ್ರಮಕ್ಕೆ ಸಲ್ಲಿಸಿದೆ.**

1) ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
2) 30 ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಉಪ ಆಯುಕ್ತರು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, ಜಿಲ್ಲಾಧಿಕಾರಿಗಳ ಕಚೇರಿ.
3) 30 ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಜಿಲ್ಲಾ ಪಂಚಾಯತ್ ಭವನ.
4) 30 ಜಿಲ್ಲೆಯ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
5) 30 ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು,
6) ಕಛೇರಿಯ ಕಡತ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮೀಣ/ನಗರ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತ ಸಿಬ್ಬಂದಿಗಳ ಗೌರವಧನ ಹೆಚ್ಚಳ ಮಾಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ ರವರ ಪತ್ರ ಸಂಖ್ಯೆ: ವಿಹಿನಿ/ಆವ್ಯಯೋ/ಸಿ2/06/2021-22, ದಿನಾಂಕ: 16.03.2022

**ಪ್ರಸ್ತಾವನೆ:**

ಮೇಲೆ ಓದಲಾದ ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ ಇವರ ದಿನಾಂಕ: 16.03.2022ರ ಪತ್ರದಲ್ಲಿ ಅಂಗವಿಕಲರ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಸ್ತುತ ರಾಜ್ಯದಲ್ಲಿ 6,022 ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು 613, ನಗರ ಪುನರ್ವಸತಿ ಕಾರ್ಯಕರ್ತರು ಮತ್ತು 225 ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳು ಗೌರವಧನದ ಮೇಲೆ ಕಾರ್ಯನಿರ್ವಸುತ್ತಿದ್ದು, ಅದರಂತೆ ಗ್ರಾಮೀಣ/ನಗರ ಪುನರ್ವಸತಿ ಕಾರ್ಯಕರ್ತರಿಗೆ ನೀಡಲಾಗುತ್ತಿದ್ದ ಮಾಸಿಕ ಗೌರವಧನದ ಮೊತ್ತವನ್ನು ರೂ. 3,000/- ಗಳಿಂದ ರೂ. 6,000/- ಗಳಿಗೆ ಮತ್ತು ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ನೀಡಲಾಗುತ್ತಿದ್ದ ಗೌರವಧನವನ್ನು ರೂ. 6,000/- ಗಳಿಂದ ರೂ. 12,000/- ಗಳಿಗೆ ಹೆಚ್ಚಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಗ್ರಾಮೀಣ ಪುನರ್ವಸತಿ ಯೋಜನೆಯಡಿ ಜಿಲ್ಲಾ ಮಟ್ಟದಲ್ಲಿ ವಿಕಲಚೇತನ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುವಂತೆ ಹಾಗೂ ಇಲಾಖಾ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸುವಂತೆ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದ್ದೇಶ ಪುನರ್ವಸತಿ ಮತ್ತು ಗ್ರಾಮೀಣ/ನಗರ ಪುನರ್ಸತಿ ಕಾರ್ಯಕರ್ತರಿಗೆ ನೀಡಲಾಗುತ್ತಿರುವ ಗೌರವಧನವನ್ನು ರೂ.8,000/-ಗಳಿಗೆ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಮಾಸಿಕ ಗೌರವಧನವನ್ನು ರೂ. 15,000/- ಗಳಿಗೆ ಹೆಚ್ಚಿಸಿ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲು ಹಾಗೂ ಲೆಕ್ಕ ಶೀರ್ಷಿಕೆ: 2235-02-101-0-53 ಉದ್ದೇಶಿತ ಲೆಕ್ಕ ಶೀರ್ಷಿಕೆ: 059 ಇತರೆ ಖರ್ಚುಗಳಡಿ ರೂ. 16.77 ಕೋಟಿಗಳ ಆಯವ್ಯಯವನ್ನು ಹೆಚ್ಚುವರಿಯಾಗಿ ಒದಗಿಸುವಂತೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಮಮಇ 99 ಪಿಹೆಚ್‌ಪಿ 2022 ಬೆಂಗಳೂರು, ದಿನಾಂಕ: 14.09.2022**

******

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮೀಣ ಹಾಗೂ ನಗರ ಪುನರ್ವಸತಿ ಕಾರ್ಯಕರ್ತರ ಮಾಸಿಕ ಗೌರವಧನವನ್ನು ರೂ. 6,000/- ರಿಂದ ರೂ. 9,000/- ಕ್ಕೆ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಮಾಸಿಕ ಗೌರವಧನವನ್ನು

..2

ರೂ. 12,000/- ರಿಂದ 15,000/- ಕ್ಕೆ ಸೆಪ್ಟೆಂಬರ್ 2022 ರಿಂದ ಅನ್ವಯವಾಗುವಂತೆ ಹೆಚ್ಚಿಸಿ ಪರಿಷ್ಕರಿಸಲಾಗಿದ್ದು, ಅಗತ್ಯವಿರುವ ಹೆಚ್ಚುವರಿ ಅನುದಾನ ರೂ. 1443.75 ಲಕ್ಷಗಳನ್ನು ಪೂರಕ ಅಂದಾಜು-1ರಲ್ಲಿ ಒದಗಿಸಲು ಕ್ರಮವಹಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 356 ವೆಚ್ಚ-10/2022, ದಿ:02.09.2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

G. H. Sarojamma 14/09/2022
(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.
ದೂರವಾಣಿ ಸಂ: 2203 2240

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ& ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ",ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001
4. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-10, ವಿಧಾನ ಸೌಧ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ(10), ವಿಧಾನ ಸೌಧ, ಬೆಂಗಳೂರು
8. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ ಒಡಿಜಿಸಿ/ ಹೆಚ್ಚುವರಿ ಪ್ರತಿಗಳು.